# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 212 (2049) |
| ಉತ್ತರಿಸಬೇಕಾದ ದಿನಾಂಕ | : | 25.03.2026 |
| ಸದಸ್ಯರ ಹೆಸರು | : | ಡಾ|| ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರವು ಅಸಹಾಯಕ, ಅಶಕ್ತ ವ್ಯಕ್ತಿಗಳಿಗಾಗಿ ಹಾಗೂ ನಿರ್ಗತಿಕ ವಿಧವೆಯರಿಗೆ ಮತ್ತು ಅಂಗವಿಕಲರಿಗೆ ಅನೇಕ ಸಾಮಾಜಿಕ ಭದ್ರತೆ ಯೋಜನೆಗಳನ್ನು ಕಾರ್ಯಗತಗೊಳಿಸುತ್ತಿದ್ದು, ಸದರಿ ಪಿಂಚಣಿಗಳನ್ನು ಪಡೆಯಲು ಕುಟುಂಬದ ಆದಾಯ ಮಿತಿಯನ್ನು 30 ಸಾವಿರ ವಿಧಿಸಲಾಗಿದೆ; | ಸರ್ಕಾರದ ಆದೇಶ ಸಂಖ್ಯೆ:DSSP/MISC-05/2020, ದಿನಾಂಕ:10.02.2021ರಂತೆ ಸರ್ಕಾರದಿಂದ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಪಿಂಚಣಿ ಸೌಲಭ್ಯವನ್ನು ಒದಗಿಸುವ ನಿಟ್ಟಿನಲ್ಲಿ ಆದಾಯ ಮಿತಿಯನ್ನು ರೂ.32,000/-ಗಳಿಗೆ ನಿಗದಿಪಡಿಸಿ ಆದೇಶಿಸಲಾಗಿರುತ್ತದೆ. |
| ಆ) | ಆದರೆ 2023ರ ನಂತರ ಗ್ಯಾರಂಟಿ ಯೋಜನೆಗಳಿಂದ ಕುಟುಂಬ ಆದಾಯ 30 ಸಾವಿರಕ್ಕಿಂತ ಹೆಚ್ಚಿದ್ದು, ಇದರಿಂದ ನಾಗರೀಕರು ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ಸೇವೆಗಳನ್ನು ಪಡೆಯಲು ಸಾಧ್ಯವಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು) | ಆದಾಯ ದೃಢೀಕರಣ ಪತ್ರವನ್ನು ವಿತರಿಸುವಾಗ ಕುಟುಂಬ ವಾರ್ಷಿಕ ಆದಾಯದಲ್ಲಿ ಗ್ಯಾರಂಟಿ ಯೋಜನೆಗಳಿಂದ ಬರುವ ಆದಾಯವನ್ನು ಪರಿಗಣಿಸಲಾಗುತ್ತಿಲ್ಲ. ಸರ್ಕಾರದ ಆದೇಶ ಸಂಖ್ಯೆ:DSSP/MISC-05/2020, ದಿ:10.02.2021ರಲ್ಲಿ ನಿಗದಿಪಡಿಸಿರುವ ರೂ.32,000/- ಆದಾಯ ಮಿತಿ ಹೊಂದಿರುವ ಅರ್ಹ ಫಲಾನುಭವಿಗಳಿಂದ ಸಾಮಾಜಿಕ ಭದ್ರತಾ ಯೋಜನೆಗಳಿಗೆ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ. ಮುಂದುವರೆದು, ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ರೈತ ಪತ್ನಿಗೆ ವಿಧವಾ ವೇತನ, ಆಸಿಡ್ ದಾಳಿಗೊಳಗಾದ ಮಹಿಳೆಯರಿಗೆ ಸಹಾಯಧನ ಮತ್ತು ಎಂಡೋಸಲ್ಫಾನ್ ಸಂತ್ರಸ್ತರಿಗೆ ನೀಡುವ ಮಿತ ವೇತನ ಯೋಜನೆಗಳಿಗೆ ಮೇಲಿನ ಆದಾಯ ಮಿತಿ ಅನ್ವಯಿಸುವುದಿಲ್ಲ. |

**ಕಡತ ಸಂಖ್ಯೆ:ಆರ್‌ಡಿ 88 ಕೆಎಟಿ ಎಸ್‌ಎಸ್‌ಪಿ 2026**

**(ಕೃಷ್ಣ ಬೈರೇಗೌಡ)**
**ಕಂದಾಯ ಸಚಿವರು**

Scanned with OKEN Scanner